ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಸಚಿವ ಸಂಪುಟ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 2/10/20

### ಭೂಸುಧಾರಣೆ, ಎಪಿಎಂಸಿ, ಕಾರ್ಮಿಕ ವಿಧೇಯಕ ಪಾಸ್ ಮಾಡಲು ನಿರ್ಧಾರ

# ವಿಧೇಯಕಗಳಿಗೆ ಸುಗ್ರೀವಾಜ್ಞೆ ದಾರಿ

**ವಿಕ ಸುದ್ದಿಲೋಕ** ಬೆಂಗಳೂರು

ಮೇಲ್ಮನೆಯಲ್ಲಿ ಪಾಸಾಗದೆ ಉಳಿದಿರುವ ಭೂಸುಧಾರಣೆ, ಎಪಿಎಂಸಿ ಹಾಗೂ ಕಾರ್ಮಿಕ ತಿದ್ದುಪಡಿ ವಿಧೇಯಕಗಳ ಸಂಬಂಧ ಪುನಃ ಸುಗ್ರೀವಾಜ್ಞೆ ಹೊರಡಿಸಲು ರಾಜ್ಯ ಸಚಿವ ಸಂಪುಟ ಸಭೆ ತೀರ್ಮಾನಿಸಿದೆ.

ಲಾಕ್‌ಡೌನ್ ವೇಳೆ ಈ ವಿಧೇಯಕಗಳ ಸಂಬಂಧ ಸುಗ್ರೀವಾಜ್ಞೆ ಹೊರಡಿಸಲಾಗಿತ್ತು. ಕಳೆದ ವಾರ ನಡೆದ ಅಧಿವೇಶನದಲ್ಲಿ ಈ ಮೂರೂ ವಿಧೇಯಕಗಳು ವಿಧಾನಸಭೆಯಲ್ಲಿ ಅಂಗೀಕಾರಗೊಂಡಿವೆ. ಆದರೆ, ಪರಿಷತ್‌ನಲ್ಲಿ ಕಾರ್ಮಿಕ ತಿದ್ದುಪಡಿ ವಿಧೇಯಕಕ್ಕೆ ಸೋಲಾಗಿದೆ. ಭೂಸುಧಾರಣೆ ಮತ್ತು ಎಪಿಎಂಸಿ ತಿದ್ದುಪಡಿ ವಿಧೇಯಕವನ್ನು ಪರಿಷತ್‌ನಲ್ಲಿ ತಡೆಹಿಡಿಯಲಾಗಿದೆ. ಈ ಹಿನ್ನೆಲೆಯಲ್ಲಿ ಸಿಎಂ ಬಿ.ಎಸ್.ಯಡಿಯೂರಪ್ಪ ಅಧ್ಯಕ್ಷತೆಯಲ್ಲಿ ಗುರುವಾರ ನಡೆದ ಸಂಪುಟ ಸಭೆಯಲ್ಲಿ ಈ ಮೂರು ವಿಧೇಯಕಗಳ ಬಗ್ಗೆ ಮತ್ತೊಮ್ಮೆ ಸುಗ್ರೀವಾಜ್ಞೆ ಹೊರಡಿಸುವ ನಿರ್ಧಾರಕ್ಕೆ ಬರಲಾಯಿತು ಎಂದು ಗೊತ್ತಾಗಿದೆ.

## ಮುಸಲ್ಮಾನರಿಗೆ ವೈಜ್ಞಾನಿಕ ಶಿಕ್ಷಣ

ಶೈಕ್ಷಣಿಕವಾಗಿ ಹಿಂದುಳಿದಿರುವ ಮುಸಲ್ಮಾನರಿಗೆ ಆಧುನಿಕ ಶಿಕ್ಷಣದ ಜತೆಗೆ ವೈಜ್ಞಾನಿಕ ಮನೋಭಾವ ಮೂಡಿಸಲು ಸಂಪುಟದಲ್ಲಿ ಮಹತ್ವದ ತೀರ್ಮಾನ ತೆಗೆದುಕೊಳ್ಳಲಾಗಿದೆ. ಈ ಉದ್ದೇಶಕ್ಕೆ ಮೌಲಾನಾ ಆಜಾದ್ ಟ್ರಸ್ಟ್ ರಚಿಸಲಾಗುತ್ತಿದ್ದು, 25 ಕೋಟಿ ರೂ. ಹಂಚಿಕೆ ಮಾಡಲಾಗಿದೆ.

## ಶಾಲೆ ಆರಂಭ ಗೊಂದಲವಿಲ್ಲ: ಸುರೇಶ್ ಕುಮಾರ್

ಶಾಲೆ ಪುನರಾರಂಭದ ಬಗ್ಗೆ ಗೊಂದಲಕ್ಕೆ ಅವಕಾಶವಿಲ್ಲ. ಈ ಸಂಬಂಧ ಯಾವುದೇ ಆದೇಶವನ್ನೂ ಹೊರಡಿಸಿಲ್ಲ. ಕೂಲಂಕಷ ಪರಾಮರ್ಶೆ ಬಳಿಕವೇ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದು ಸಂಪುಟ ಸಭೆಗೆ ಶಿಕ್ಷಣ ಸಚಿವ ಎಸ್.ಸುರೇಶ್‌ಕುಮಾರ್ ತಿಳಿಸಿದರು ಎನ್ನಲಾಗಿದೆ.



## ಕೆಲ ತಿಂಗಳು ದಂಡ ಅನಿವಾರ್ಯ

ಕೋವಿಡ್ ನಿಯಂತ್ರಣದ ಮಾರ್ಗಸೂಚಿಯನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಆದರೆ, ಮಾಸ್ಕ್ ಧರಿಸದವರಿಗೆ 1 ಸಾವಿರ ರೂ.ವರೆಗೆ ದಂಡ ವಿಧಿಸುವುದು ದುಬಾರಿಯಾಗುತ್ತದೆ. ಈ ತಪಾಸಣೆಯನ್ನು ಪೊಲೀಸರಿಗೆ ವಹಿಸುವುದೂ ಅಪಾಯಕಾರಿಯೆಂದು ಸಂಪುಟ ಸಭೆಯಲ್ಲಿ ಪ್ರಸ್ತಾಪವಾಯಿತು. ಕೆಲ ಸಚಿವರು ಈ ಕ್ರಮಕ್ಕೆ ವಿರೋಧಿಸಿದರು. ಆದರೆ, ದುಬಾರಿ ದಂಡದ ಭಯದಿಂದಲಾದರೂ ಜನರು ಮಾಸ್ಕ್ ಧರಿಸಿ ಓಡಾಡುತ್ತಾರೆ. ಇನ್ನು ಕೆಲವು ತಿಂಗಳು ಈ ಕ್ರಮ ಅನಿವಾರ್ಯವೆಂದು ವೈದ್ಯ ಶಿಕ್ಷಣ ಸಚಿವ ಡಾ.ಕೆ.ಸುಧಾಕರ್ ಸಮರ್ಥಿಸಿಕೊಂಡರು. ಸಹಮತ ವ್ಯಕ್ತಪಡಿಸಿದ ಸಿಎಂ ಬಿಎಸ್‌ವೈ, ಇದರಿಂದ ಜನರಿಗೆ ಕಿರುಕುಳವಾಗದಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದರು ಎಂದು ತಿಳಿದು ಬಂದಿದೆ.

## ಸಂಪುಟ ಸಭೆಗೂ ಕೊರೊನಾ ಭೀತಿ, ಹಲವು ಸಚಿವರು ಗೈರು

ಕೊರೊನಾ ಭೀತಿ ಹಿನ್ನೆಲೆಯಲ್ಲಿ ಸಂಪುಟ ಸಭೆಗೆ ಹಲವು ಸಚಿವರು ಗೈರು ಹಾಜರಾದರು. ಡಿಸಿಎಂ ಗೋವಿಂದ ಕಾರಜೋಳ, ಸಚಿವರಾದ ಜೆ.ಸಿ.ಮಾಧುಸ್ವಾಮಿ, ಪ್ರಭು ಚೌಹಾಣ್, ಶಶಿಕಲಾ ಜೊಲ್ಲೆ, ಕೆ.ಗೋಪಾಲಯ್ಯ ಕೋವಿಡ್ ಕಾರಣ ಸಭೆಗೆ ಬಂದಿರಲಿಲ್ಲ. ಕೋವಿಡ್‌ನಿಂದ ಈಗಷ್ಟೇ ಚೇತರಿಸಿಕೊಂಡಿರುವ ಗೃಹ ಸಚಿವ ಬಸವರಾಜ ಬೊಮ್ಮಾಯಿ ಅವರೂ ಬಂದಿರಲಿಲ್ಲ. ಉಳಿದಂತೆ ಡಿಸಿಎಂ ಲಕ್ಷ್ಮಣ ಸವದಿ, ಆರ್.ಅಶೋಕ್, ಸಿ.ಸಿ.ಪಾಟೀಲ್, ಆನಂದ ಸಿಂಗ್, ಶ್ರೀಮಂತ ಪಾಟೀಲ್ ಗೈರು ಹಾಜರಾಗಿದ್ದರು.

## ಪ್ರಮುಖಾಂಶ

- ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ನೋಂದಣಿ ಮಾಡಿಕೊಂಡಿರುವ 76 ಸಾವಿರ ಕಾರ್ಮಿಕರಿಗೆ ಅಗತ್ಯ ಉಪಕರಣ ಕಿಟ್ ನೀಡಲು 28.18 ಕೋಟಿ ರೂ.
- ಸರಕಾರಿ, ಅನುದಾನಿತ [illegible] ಐಟಿಐಗಳಲ್ಲಿ ತರಬೇತಿ ಪಡೆಯುತ್ತಿರುವ ಎಸ್‌ಸಿ, ಎಸ್‌ಟಿ ವಿದ್ಯಾರ್ಥಿಗಳಿಗೆ ಟೂಲ್ ಕಿಟ್ ನೀಡಲು 11.75 ಕೋಟಿ ರೂ.
- ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿಯಮಿತದ ರಿಯಾಯಿತಿ ಒಪ್ಪಂದ ಅವಧಿ ವಿಸ್ತರಣೆ.
- ದೇವದುರ್ಗದ ಊಟಿ ಚಿನ್ನದ ಗಣಿಯಲ್ಲಿ ಭೂ ಕೆಳಮೈ ಗಣಿ ಅಭಿವೃದ್ಧಿ ಯೋಜನೆಯ 63.08 ಕೋಟಿ ರೂ. ಪರಿಷ್ಕೃತ ಅಂದಾಜಿಗೆ ಒಪ್ಪಿಗೆ.
- ಬೆಂಗಳೂರಿನ ಮಾಗಡಿ ರಸ್ತೆ ಬಳಿಯ ನಿರಾಶ್ರಿತರ ಪರಿಹಾರ ಕೇಂದ್ರದ ಆವರಣದಲ್ಲಿ ಡಾ.ಬಾಬು ಜಗಜೀವನರಾಂ ತರಬೇತಿ ಕೇಂದ್ರದ ಕಟ್ಟಡ ನಿರ್ಮಾಣಕ್ಕೆ 98.93 ಕೋಟಿ ರೂ.
- ರಾಜ್ಯ ಪೊಲೀಸ್ ಸೇವೆಗಳು (ಪೊಲೀಸ್ ಕಾನ್‌ಸ್ಟೆಬಲ್, ಎಸ್‌ಐ, ಪೊಲೀಸ್ ಉಪ ಅಧೀಕ್ಷಕರ ಹುದ್ದೆಗೆ ಪ್ರತಿಭಾವಂತ ಕ್ರೀಡಾಪಟುಗಳ ನೇರ ನೇಮಕ) ನಿಯಮ-2020ಕ್ಕೆ ಅನುಮೋದನೆ.
- ಕಾರ್ಮಿಕರ ಕಲ್ಯಾಣ ಮಂಡಳಿಯಿಂದ 90 ಸಾವಿರ ಕಟ್ಟಡ ಕಾರ್ಮಿಕರಿಗೆ ಸೇಫ್ಟಿ ಕಿಟ್ ನೀಡಲು 42.39 ಕೋಟಿ ರೂ.